**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ  ನ್ಯಾಯಾಲಯ , ಮಾಗಡಿ**

**ಕ್ರಿಮಿನಲ್ ಪ್ರಕರಣ ಸಂಖ್ಯೆ ಃ  595/2021**

**ಚಾಸಾ ಃ- 16  /  ಪ್ರಾಸಾ ಃ- 4**

| | |
|---|---|
| ಹೆಸರು | **ಮಂಜುನಾಥ ಬಿ. ಎಸ್** |
| ತಂದೆಯ  ಹೆಸರು | **ಶಿವಲಿಂಗೇಗೌಡ** |
| ವಯಸ್ಸು | **45** |
| ಉದ್ಯೋಗ | **ಆರಕ್ಷಕ ನಿರೀಕ್ಷಕರು** |
| ವಿಳಾಸ | **ಆನೇಕಲ್** |

**ದಿನಾಂಕಃ20-02-2025** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ **ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ನಾನು 2020 ನೇ ಇಸವಿಯ ಮಾರ್ಚ್ ತಿಂಗಳಿನಿಂದ 2021 ನೇ ಇಸವಿಯ ಮಾರ್ಚ್ ತಿಂಗಳಿನವರೆಗೆ  ಮಾಗಡಿಯ ವೃತ್ತಾ ನಿರೀಕ್ಷಕರಾಗಿ ಕಾರ್ಯನಿರ್ವಹಿಸಿದ್ದೇನೆ.

ದಿನಾಂಕ 03-11-2020 ರಂದು ಚಾಸಾ-15 ರವರಿಂದ ಈ ಪ್ರಕರಣದ ಕಡತವನ್ನು ಪಡೆದುಕೊಂಡು ತನಿಖೆಯನ್ನು ಮುಂದುವರೆಸಿರುತ್ತೇನೆ. ಅದೇ ದಿನದಂದು ಈ ಪ್ರಕರಣದಲ್ಲಿ ಅಪಘಾತ ಮಾಡಿರುವ ವಾಹನದ ಮಾಲೀಕರಾದ ಚಾಸಾ-10 ರವರಿಗೆ ಕಲಂ. 133 ಐ.ಎಂ.ವಿ ಕಾಯಿದೆ ರೀತ್ಯ ನೋಟಿಸ್ ನ್ನು ನೀಡಿರುತ್ತೇನೆ. ಈಗ ಸಾಕ್ಷಿಗೆ ನೋಟಿಸ್ ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ನೋಟಿಸ್ ನ್ನು ನಿಪಿ-09 ಸಾಕ್ಷಿಯ ಸಹಿಯನ್ನು ನಿಪಿ-09(ಎ) ಎಂದು ಗುರುತಿಸಲಾಯಿತು. ಅದೇ ದಿನದಂದು ಚಾಸಾ-10 ರವರು ನಿಪಿ-09 ಕ್ಕೆ ಉತ್ತರವನ್ನು ನೀಡಿರುತ್ತಾರೆ. ಈಗ ಸಾಕ್ಷಿಗೆ ಪ್ರತ್ಯುತ್ತರವನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಪ್ರತ್ಯುತ್ತರವನ್ನು ನಿಪಿ-10 ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು.

ಅದೇ ದಿನದಂದು ಆರೋಪಿಯು ನನ್ನ ಮುಂದೆ ಹಾಜರಾಗಿದ್ದರು, ಅವರನ್ನು ದಸ್ತಗಿರಿ ಮಾಡಿ ಆರೋಪಿಯ ಸ್ವಇಚ್ಛಾ ಹೇಳಿಕೆಯನ್ನು ಪಡೆದುಕೊಂಡ ನಂತರ ಸೂಕ್ತ ಜಾಮೀನಿನ ಮೇರೆಗೆ ಬಿಡುಗಡೆ ಮಾಡಿರುತ್ತೇನೆ. ನಾನು ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಇಂದು ನ್ಯಾಯಾಲಯದ ಮುಂದೆ ಆರೋಪಿಯು ಹಾಜರಿರುವುದಿಲ್ಲ. ಆರೋಪಿಯನ್ನು ಗುರುತಿಸುವಲ್ಲಿ ಆರೋಪಿಯ ಪರ ವಕೀಲರಿಂದ ಯಾವುದಲೇ ತಕರಾರು ಇರುವುದಿಲ್ಲ. ಅದೇ ದಿನದಂದು ಚಾಸಾ-13 ರವರಿಂದ ಮೃತ ವ್ಯಕ್ತಿಯ ಪಿ. ಎಂ ವರದಿಯನ್ನು ಪಡೆದುಕೊಂಡಿರುತ್ತೇನೆ. ಈಗ ಸಾಕ್ಷಿಗೆ ನಿಪಿ-6 ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-06(ಎ) ಎಂದು ಗುರುತಿಸಲಾಯಿತು.

ದಿ.04-11-2020 ರಂದು ಈ ಪ್ರಕರಣದಲ್ಲಿ ಇರುವ 2 ವಾಹನಗಳನ್ನು ಐ.ಎಂ.ವಿ ತಪಾಸಣೆಗಾಗಿ ಕಳುಹಿಸಿರುತ್ತೇನೆ. ಅದೇ ದಿನದಂದು ಐ.ಎಂ.ವಿ ತಪಾಸಣೆ ಆದ ನಂತರ ಚಾಸಾ-10 ರವರವರ ಹೇಳಿಕೆ ಮತ್ತು ಇಂಡೆಮ್ನಿಟಿ ಬಾಂಡ್ ನ್ನು ಪಡೆದು ಅಪಘಾತ ಉಂಟು ಮಾಡಿರುವ ವಾಹನವನ್ನು ಬಿಡುಗಡೆ ಮಾಡಿರುತ್ತೇನೆ. ಈಗ ಸಾಕ್ಷಿಗೆ ಇಂಡೆಮ್ನಿಟಿ ಬಾಂಡ್ ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಇಂಡೆಮ್ನಿಟಿ ಬಾಂಡ್ ನಿಪಿ-11 ಎಂದು ,ಸಾಕ್ಷಿಯ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು. ಈಗ ಸಾಕ್ಷಿಗೆ ಚಾಸಾ-10 ರವರ ಹೇಳಿಕೆಯನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಚಾಸಾ-10 ರವರ ಹೇಳಿಕೆಯನ್ನು ನಿಪಿ-12 ಎಂದು, ಸಾಕ್ಷಿಯ ಸಹಿಯನ್ನು ನಿಪಿ-12(ಎ) ಎಂದು ಗುರುತಿಸಲಾಯಿತು. ಈಗ ಸಾಕ್ಷಿಗೆ ನಿಪಿ-02 ಮತ್ತು 3 ಅನ್ನು ತೋರಿಸಿದ್ದು, ಅದರಲ್ಲಿರುವ ವಾಹನವನ್ನು ನಾನು ಬಿಡುಗಡೆ ಮಾಡಿರುತ್ತೇನೆ. ಅದೇ ದಿನದಂದು ಚಾಸಾ-14 ರವರಿಂದ ಐ. ಎಂ. ವಿ ವರದಿಯನ್ನು ಪಡೆದಿರುತ್ತೇನೆ. ಈಗ ಸಾಕ್ಷಿಗೆ ನಿಪಿ-7 ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ

ಸಹಿಯನ್ನು ನಿಪಿ-07(ಎ) ಎಂದು ಗುರುತಿಸಲಾಯಿತು.

ದಿ.14-12-2020 ರಂದು ಚಾಸಾ-1 ಮತ್ತು ಪ್ರಾಸಾ-3 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಈಗ ಸಾಕ್ಷಿಗೆ ಚಾಸಾ-1 ರವರ ಹೇಳಿಕೆಯನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಚಾಸಾ-1 ರವರ ಹೇಳಿಕೆಯನ್ನು ನಿಪಿ-13 ಎಂದು, ಸಾಕ್ಷಿಯ ಸಹಿಯನ್ನು ನಿಪಿ-13(ಎ) ಎಂದು ಗುರುತಿಸಲಾಯಿತು. ಈಗ ಸಾಕ್ಷಿಗೆ ನಿಪಿ-8 ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-08(ಎ) ಎಂದು ಗುರುತಿಸಲಾಯಿತು. ಅದೇ ದಿನದಂದು ಅಪಘಾತಕ್ಕೆ ಒಳಗಾದ ದ್ವಿ ಚಕ್ರವಾಹನವನ್ನು ಇಂಡೆಮ್ನಿಟಿ ಬಾಂಡ್ ಪಡೆದು ಬಿಡುಗಡೆ ಮಾಡಿರುತ್ತೇನೆ. ಈಗ ಸಾಕ್ಷಿಗೆ ಇಂಡೆಮ್ನಿಟಿ ಬಾಂಡ್ ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಇಂಡೆಮ್ನಿಟಿ ಬಾಂಡ್ ನ್ನು ನಿಪಿ-14 ಎಂದು, ಸಾಕ್ಷಿಯ ಸಹಿಯನ್ನು ನಿಪಿ-14(ಎ) ಎಂದು ಗುರುತಿಸಲಾಯಿತು. ಈಗ ಸಾಕ್ಷಿಗೆ ನಿಪಿ-4 ನ್ನು ತೋರಿಸಿದ್ದು, ಅದರಲ್ಲಿ ಇರುವ ದ್ವಿ ಚಕ್ರವಾಹನವನ್ನು ಬಿಡುಗಡೆ ಮಾಡಿರುತ್ತೇನೆ.

ದಿ.31-12-2020 ರಂದು ಚಾಸಾ-12 ರವರಿಂದ ಚಾಸಾ-1 ರವರ ಗಾಯದ ಪ್ರಮಾಣಪತ್ರವನ್ನು ಪಡೆದುಕೊಂಡಿರುತ್ತೇನೆ. ಈಗ ಸಾಕ್ಷಿಗೆ ಗಾಯದ ಪ್ರಮಾಣಪತ್ರವನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಗಾಯದ ಪ್ರಮಾಣಪತ್ರವನ್ನು ನಿಪಿ-15 ಎಂದು, ಸಾಕ್ಷಿಯ ಸಹಿಯನ್ನು ನಿಪಿ-15(ಎ) ಎಂದು ಗುರುತಿಸಲಾಯಿತು. ಅದೇ ದಿನದಂದು ಆರೋಪಿಯ ವಿರುದ್ದ ಆರೋಪವು ಸಾಬೀತಾದ ಕಾರಣದಿಂದ ನ್ಯಾಯಾಲಯಕ್ಕೆ ಆರೋಪಿಯ ವಿರುದ್ದ ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

**ಪಾಟೀ ಸವಾಲು :- ಆರೋಪಿಯ ಪರ ಶ್ರೀ. ಎಂ. ಎನ್ , ವಕೀಲರಿಂದ :-**

ನೀವು ಚಾಸಾ-10 ರವರಿಗೆ ಯಾವುದೇ ನೋಟಿಸ್ ನ್ನು ನೀಡಿರುವುದಿಲ್ಲ, ಅವರು ನಿಮಗೆ ಪ್ರತ್ಯುತ್ತರವನ್ನು ನೀಡಿರುವುದಿಲ್ಲ ಮತ್ತು ನೀವು ಅವರ

ಹೇಳಿಕೆಯನ್ನು ಸಹ ಪಡೆದುಕೊಂಡಿರುವುದಿಲ್ಲ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನಿಮಗೆ ಚಾಸಾ-1, ಪ್ರಾಸಾ-3 ಮತ್ತು ಆರೋಪಿಯು ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನೀವು ಮತ್ತು ಚಾಸಾ-12 ರವರು ಶಾಮೀಲಾಗಿ ಚಾಸಾ-1 ರವರಿಗೆ ಅನುಕೂಲವಾಗುವಂತೆ ನಿಪಿ-15 ನ್ನು ಸೃಷ್ಟಿ ಮಾಡಿರುತ್ತೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಚಾಸಾ-15 ರವರು ಸುಳ್ಳು ದಾಖಲೆಗಳನ್ನು ಸೃಷ್ಟಿ ಮಾಡಿದ್ದರು ಮತ್ತು ನೀವು ಅದಕ್ಕೆ ಅನುಗುಣವಾಗಿ ಸರಿಯಾಗಿ ತನಿಖೆ ಮಾಡದೇ ದಾಖಲೆಗಳನ್ನು ಸೃಷ್ಟಿಸಿ ಮೃತರ ಕುಟುಂಬಕ್ಕೆ ಸಹಾಯ ಮಾಡುವ ಉದ್ದೇಶದಿಂದ ಆರೋಪಿಯ ವಿರುದ್ದ ಸುಳ್ಳು ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ,**
**ಮಾಗಡಿ**

**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ , ಮಾಗಡಿ**

**ಕ್ರಿಮಿನಲ್ ಪ್ರಕರಣ ಸಂಖ್ಯೆ : 626/2018**

**ಚಾಸಾ :- 8 / ಪ್ರಾಸಾ :- 5**

| | |
|---|---|
| ಹೆಸರು | **ಎಲ್ ಸಿಎಸ್ ಮಂಜುನಾಥ** |
| ತಂದೆಯ ಹೆಸರು | ಎಲ್ ಸಿ ಶಿವರುದ್ರಯ್ಯ |
| ವಯಸ್ಸು | **53** |
| ಉದ್ಯೋಗ | **ಎ ಎಸ್ ಐ** |
| ವಿಳಾಸ | **ಬೆಂಗಳೂರು** |

ದಿನಾಂಕ:**20-06-2024** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ **ಬೋಧಿಸಲಾಯಿತು.**

**ಮುಖ್ಯ ವಿಚಾರಣೆ :- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ :-**

ನಾನು 2014 ರಿಂದ 2021 ವರೆಗೆ ತಾವರೆಕೆರೆ ಪೋಲೀಸ್ ಠಾಣೆ ಮುಖ್ಯ ಪೇದೆಯಾಗಿ ಕಾರ್ಯನಿರ್ವಹಿಸಿದ್ದೇನೆ.

ದಿನಾಂಕ 28.01.2016 ರಂದು ಮಧ್ಯಾಹ್ನ 3.00 ಗಂಟೆಯ ಸಮಯದಲ್ಲಿ ಪಿರ್ಯಾದುದಾರರು ಠಾಣೆಗೆ ಹಾಜರಾಗಿ ಲಿಖಿತ ದೂರನ್ನು ನೀಡಿದ ಮೇರೆಗೆ ಠಾಣಾ ಮೊಕದ್ದಮೆ ನಂ.36/2016 ಎಂದು ನಮೂದಿಸಲಾಯಿತು. ಸದರಿ ಮೊಕದ್ದಮೆ ನಂ. ಕಲಂ 341, 323, 504, 506 ಸಹವಾಚಕ 34 ಐಪಿಸಿ ಯ ರೀತ್ಯ ಪ್ರಕರಣ ದಾಖಲು ಮಾಡಲಾಯಿತು. ಈಗ ಸಾಕ್ಷಿಗೆ ನಿಪಿ-1 ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸದರಿ ದೂರಿನ ಮೇರೆಗೆ ಪ್ರಥಮ ವರ್ತಮಾನ ವರದಿಯನ್ನು ಮಾಡಲಾಯಿತು. ಈಗ ಸಾಕ್ಷಿಗೆ ಪ್ರಥಮ ವರ್ತಮಾನ ವರದಿಯನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಪ್ರಥಮ ವರ್ತಮಾನ ವರದಿಯನ್ನು ನಿಪಿ-4 ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು.

ದಿನಾಂಕ 28.01.2016 ರಂದು ಸಂಜೆ 4.00 ರಿಂದ 4.30 ರವರೆಗೆ ಪ್ರಾಸಾ-1 ರವರು ತೋರಿಸಿದ ಜಾಗದಲ್ಲಿ ನಿಪಿ-2 ರಂತೆ ಪಂಚನಾಮೆಯನ್ನು

ಪ್ರಾಸಾ-1 ಮತ್ತು ಚಾಸಾ-5 ಮತ್ತು 6 ರವರ ಸಮಕ್ಷಮದಲ್ಲಿ ಮಾಡಲಾಯಿತು. ಈಗ ಸಾಕ್ಷಿಗೆ ಪಂಚನಾಮೆಯನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ಗುರುತಿಸಿರುತ್ತಾರೆ. ಅದನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ದಿನಾಂಕ 01.02.2016 ರಂದು ಪ್ರಾಸಾ-1 ರಿಂದ 3 ಮತ್ತು ಚಾಸಾ-4 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ನಂತರ ಹೆಚ್ಚಿನ ತನಿಖೆಗೆ ಕಡತವನ್ನು ಪ್ರಾಸಾ-4 ರವರಿಗೆ ವರ್ಗಾವಣೆ ಮಾಡಲಾಯಿತು.

**ಪಾಟೀ ಸವಾಲು ಃ- ಆರೋಪಿ ಪರ ಶ್ರೀ. ಜೆ ಹೆಚ್ ೨ಎಂ, ವಕೀಲರಿಂದ ಃ-**

ನಿಪಿ-1 ರ ಲ್ಲಿ ಪ್ರಾಸಾ 1 ರವರು ಸಿವಿಲ್ ವ್ಯಾಜ್ಯದ ಬಗ್ಗೆ ಹೇಳಿರುತ್ತಾರೆ ಮತ್ತು ಸದರಿ ಸಿವಿಲ್ ವ್ಯಾಜ್ಯದ ಬಗ್ಗೆ ನೀವು ಎಫ್ ಐ ಆರ್ ಅನ್ನು ದಾಖಲೆ ಮಾಡುವ ಸಮಯದಲ್ಲಿ ತನಿಖೆ ಮಾಡಿರುತ್ತೀರಾ ಎಂದರೆ ಸಾಕ್ಷಿಯು ಇಲ್ಲ ಎನ್ನುತ್ತಾರೆ. ಪ್ರಾಸಾ-1 ರವರು ಅವರ ಮರು ಹೇಳಿಕೆಯಲ್ಲಿ ಕೂಲಿ ಕೆಲಸದವರು ಕೆಲಸವನ್ನು ಮಾಡುತ್ತಿದ್ದರು ಎಂದು ಹೇಳಿರುತ್ತಾರೆ ಮತ್ತು ಸದರಿ ಕೂಲಿ ಕೆಲಸದವರ ಬಗ್ಗೆ ನಾನು ಯಾವುದೇ ತನಿಖೆಯನ್ನು ಮಾಡಿರುವುದಿಲ್ಲ. ನಿಪಿ-02 ರಂತೆ ಪಂಚನಾಮೆಗೆ ಹಾಜರಿರುವಂತೆ ಹೇಳಿ ನಾನು ಪಂಚರಿಗೆ ಯಾವುದೇ ನೋಟೀಸನ್ನು ನೀಡಿರುವುದಿಲ್ಲ , ಆದರೆ ಮೌಖಿಕವಾಗಿ ಹೇಳಿರುತ್ತೇನೆ. ನೀವು ಯಾವುದೇ ಸಾಕ್ಷಿದರರುಗಳ ಹೇಳಿಕೆಯನ್ನು ಪಡೆದುಕೊಂಡಿರುವುದಿಲ್ಲ ಮತ್ತು ಪ್ರಾಸಾ -1 ರವರು ನೀಡಿದ ಸುಳ್ಳು ದೂರಿನ ಆಧಾರದ ಮೇಲೆ ಸುಳ್ಳು ಎಫ್ಐ ಆರ್ ಅನ್ನು ಹಾಕಿರುತ್ತೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನೀವು ಕೃತ್ಯ ನಡೆಯಿತು ಎಂದು ಹೇಳುವ ಸ್ಥಳಕ್ಕೆ ಹೋಗಿರುವುದಿಲ್ಲ , ಪಂಚನಾಮೆಯನ್ನು ಮಾಡಿರುವುದಿಲ್ಲ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ,**
**ಮಾಗಡಿ**

**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ , ಮಾಗಡಿ**

**ಕ್ರಿಮಿನಲ್ ಪ್ರಕರಣ ಸಂಖ್ಯೆ : 670/2020**

**ಚಾಸಾ :- 24 / ಪ್ರಾಸಾ :- 11**

| | |
|---|---|
| ಹೆಸರು | **ಎಲ್ ಽಎಸ್ ಮಂಜುನಾಥ** |
| ತಂದೆಯ ಹೆಸರು | ಎಲ್ ಸಿ ಶಿವರುದ್ರಯ್ಯ |
| ವಯಸ್ಸು | **53** |
| ಉದ್ಯೋಗ | **ಎ ಎಸ್ ಐ** |
| ವಿಳಾಸ | **ಬೆಂಗಳೂರು** |

**ದಿನಾಂಕ:20-06-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ :- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ :-**

ನಾನು 2014 ರಿಂದ 2021 ವರೆಗೆ ತಾವರೆಕೆರೆ ಪೋಲೀಸ್ ಠಾಣೆ ಮುಖ್ಯ ಪೇದೆಯಾಗಿ ಕಾರ್ಯನಿರ್ವಹಿಸಿದ್ದೇನೆ.

ದಿನಾಂಕ 26.03.2019 ರಂದು ಬೆಳಗ್ಗೆ 11.00 ಗಂಟೆಯ ಸಮಯದಲ್ಲಿ ಪಿರ್ಯಾದುದಾರರು ಠಾಣೆಗೆ ಹಾಜರಾಗಿ ಲಿಖಿತ ದೂರನ್ನು ನೀಡಿದ ಮೇರೆಗೆ ಠಾಣಾ ಮೊಕದ್ದಮೆ ನಂ.103/2019 ಎಂದು ನಮೂದಿಸಲಾಯಿತು. ಸದರಿ ಮೊಕದ್ದಮೆ ನಂ. ಕಲಂ 279, 337, 304-ಎ ಐಪಿಸಿ ಯ ರೀತ್ಯ ಪ್ರಕರಣ ದಾಖಲು ಮಾಡಲಾಯಿತು. ಈಗ ಸಾಕ್ಷಿಗೆ ನಿಪಿ-7 ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-7(ಬಿ) ಎಂದು ಗುರುತಿಸಲಾಯಿತು. ಸದರಿ ದೂರಿನ ಮೇರೆಗೆ ಪ್ರಥಮ ವರ್ತಮಾನ ವರದಿಯನ್ನು ಮಾಡಲಾಯಿತು. ಈಗ ಸಾಕ್ಷಿಗೆ ಪ್ರಥಮ ವರ್ತಮಾನ ವರದಿಯನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಪ್ರಥಮ ವರ್ತಮಾನ ವರದಿಯನ್ನು ನಿಪಿ-28 ಸಾಕ್ಷಿಯ ಸಹಿಯನ್ನು ನಿಪಿ-28(ಎ) ಎಂದು ಗುರುತಿಸಲಾಯಿತು.

ದಿನಾಂಕ 26.03.2019 ರಂದು ಅಪಘಾತ ನಡೆದ ಸ್ಥಳದಲ್ಲಿ ನಿಪಿ-8 ರಂತೆ ಪಂಚನಾಮೆಯನ್ನು ಪ್ರಾಸಾ-2, 9 ಮತ್ತು ಚಾಸಾ-11 ರವರ ಸಮಕ್ಷಮದಲ್ಲಿ

ಮಾಡಲಾಯಿತು. ಈಗ ನನಗೆ ನಿಪಿ-8 ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ಗುರುತಿಸಿರುತ್ತಾರೆ. ಅದನ್ನು ನಿಪಿ-8(ಸಿ) ಎಂದು ಗುರುತಿಸಲಾಯಿತು. ಪಂಚನಾಮೆಯನ್ನು ಮಾಡುವ ಸಮಯದಲ್ಲಿ ಕಚ್ಚಾ ನಕ್ಷೆಯನ್ನು ತಯಾರು ಮಾಡಿರುತ್ತೇವೆ. ಈಗ ಸಾಕ್ಷಿಗೆ ಕಚ್ಚಾ ನಕ್ಷೆಯನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಕಚ್ಚಾ ನಕ್ಷೆಯನ್ನು ನಿಪಿ-29 ಎಂದು ಸಾಕ್ಷಿಯ ಸಹಿಯನ್ನು ನಿಪಿ-29(ಎ) ಎಂದು ಗುರುತಿಸಲಾಯಿತು. ಪಂಚನಾಮೆಯನ್ನು ಮಾಡುವ ಸಮಯದಲ್ಲಿ 3 ವಾಹನಗಳನ್ನು ವಶಪಡಿಸಿಕೊಂಡಿರುತ್ತೇವೆ. ಸದರಿ ವಾಹನಗಳು ಮಾರುತಿ 800 ಸಂಖ್ಯೆ ಕೆಎ-02-ಎಂಎ-6891 , ಫಾರ್ಚುನರ್ ಸಂಖ್ಯೆ ಕೆಎ 56-ಎನ್ 5555 ಮತ್ತು ಐ-20 ಕಾರ್ ಸಂಖ್ಯೆ ಕೆಎ 43 ಎಂ-3709 ಆಗಿದೆ. ಈಗ ಸಾಕ್ಷಿಗೆ ನಿಪಿ-1 ರಿಂದ 6 ಅನ್ನು ತೋರಿಸಿದ್ದು , ಸದರಿ ವಾಹನಗಳನ್ನು ಪಂಚನಾಮೆ ಮಾಡುವ ಸಮಯದಲ್ಲಿ ವಶಪಡಿಸಿಕೊಂಡಿರುತ್ತೇವೆ. ಅಮಾನತು ಮಾಡಿದ ವಾಹನಗಳನ್ನು ಮಾಲು ಪಟ್ಟಿ ಸಂಖ್ಯೆ 73/2019 ರಲ್ಲಿ ದಾಖಲಿಸಲಾಯಿತು. ಈಗ ಸಾಕ್ಷಿಗೆ ಮಾಲುಪಟ್ಟಿಯನ್ನು ತೋರಿಸಿದ್ದು , ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಮಾಲುಪಟ್ಟಿಯನ್ನು ನಿಪಿ-30, ಸಾಕ್ಷಿಯ ಸಹಿಯನ್ನು ನಿಪಿ-30(ಎ) ಎಂದು ಗುರುತಿಸಲಾಯಿತು. ನಂತರ ಹೆಚ್ಚಿನ ತನಿಖೆಗೆ ಕಡತವನ್ನು ಚಾಸಾ-25 ರವರಿಗೆ ವರ್ಗಾವಣೆ ಮಾಡಲಾಯಿತು.

**ಪಾಟೀ ಸವಾಲು :- ಆರೋಪಿ ಪರ ಶ್ರೀ. ಸಿ ಕೆ ಆರ್ , ವಕೀಲರಿಂದ :-**

ನಾನು ಅಪಘಾತ ನಡೆದ ಸ್ಥಳವನ್ನು ಖುದ್ದಾಗಿ ನೋಡಿರುತ್ತೇನೆ. ಸದರಿ ಸ್ಥಳವು ಮಾಗಡಿ ಕಡೆಯಿಂದ ತಾವರೆಕೆರೆ ಕಡೆಗೆ ಇಳಿಜಾರಿನಿಂದ ಕೂಡಿದೆ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಅಪಘಾತ ನಡೆದ ಸಮಯದಲ್ಲಿ ಸದರಿ ಜಾಗದಲ್ಲಿ ಯಾವುದೇ ಡಿವೈಡರ್ ಇರಲಿಲ್ಲ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಅಪಘಾತ ನಡೆದ ಸಮಯದಲ್ಲಿ ರಸ್ತೆಯ ಕಾಮಗಾರಿ ನಡೆಯುತ್ತಿತ್ತು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನಿಪಿ-08 ರಂತೆ ಪಂಚನಾಮೆ ಮಾಡಲು ಸಹಕರಿಸುವಂತೆ ಹೇಳಿ ನಾನು ಪಂಚರಿಗೆ ಲಿಖಿತವಾಗಿ ನೋಟೀಸನ್ನು ನೀಡಿರುವುದಿಲ್ಲ, ಆದರೆ ಮೌಖಿಕವಾಗಿ ಹೇಳಿರುತ್ತೇನೆ. ಚಾಸಾ-11 ರವರು

ಬೈಚಗುಪ್ಪೆ ಗ್ರಾಮದವರು ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ನೀವು ಅಪಘಾತ ನಡೆದ ಸ್ಥಳಕ್ಕೆ ಹೋಗಿಲ್ಲ , ನಿನಿಪಿ-8 ರಂತೆ ಪಂಚನಾಮೆಯನ್ನು ಮಾಡಿಲ್ಲ ಮತ್ತು ನಿಪಿ-8 ಅನ್ನು ಠಾಣೆಯಲ್ಲಿಯೇ ತಯಾರು ಮಾಡಿರುತ್ತೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನೀವು ಮೃತ ಕುಟುಂಬದವರಿಗೆ ಪರಿಹಾರ ಬರಬೇಕು ಎಂಬ ಉದ್ದೇಶದಿಂದ ಪ್ರಾಸಾ-2 ರವರಿಂದ ಸುಳ್ಳು ದೂರನ್ನು ಪಡೆದು ಸುಳ್ಳು ಎಫ್ ?ಐ ಆರ್ ನ್ನು ಮಾಡಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ,**
**ಮಾಗಡಿ**